ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಘಟಿಕೋತ್ಸವ ಪ್ರಮಾಣ ಪತ್ರಗಳ ವಿತರಣೆ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

355 (564) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹುಬ್ಬಳ್ಳಿಯ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದಿಂದ ಪ್ರತಿ ವರ್ಷ ಕಾನೂನು ಪದವಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಎಷ್ಟು ದಿನಗಳೊಳಗಾಗಿ ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ವಿತರಿಸಲಾಗುತ್ತಿದೆ ; (ಕಳೆದ 5 ವರ್ಷಗಳ ಅವಧಿಯಲ್ಲಿ ಘಟಿಕೋತ್ಸವ ನಡೆದಿರುವ ಮಾಹಿತಿಯನ್ನು ಒದಗಿಸುವುದು)

(ಆ) ಹುಬ್ಬಳ್ಳಿಯ ಕರ್ನಾಟಕ ಕಾನೂನು ವಿಶ್ವವಿದ್ಯಾಲಯದಿಂದ ಕಾನೂನು ಪದವಿ (ಎಲ್.ಎಲ್.ಬಿ) ಪಡೆದ ವಿದ್ಯಾರ್ಥಿಗಳಿಗೆ ಘಟಿಕೋತ್ಸವ ಪ್ರಮಾಣ ಪತ್ರವನ್ನು 2016-17ನೇ ಸಾಲಿನಿಂದ ಪ್ರಸ್ತುತ ಇಲ್ಲಿಯವರೆವಿಗೂ ನೀಡದೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ;

(ಇ) ಕಾನೂನು ಪದವಿ ಪಡೆದವರಿಗೆ ಘಟಿಕೋತ್ಸವ ಪ್ರಮಾಣ ಪತ್ರ ನೀಡದೆ ವಕೀಲ ವೃತ್ತಿಯನ್ನು ಪ್ರಾರಂಭಿಸಲು ಹಾಗೂ ಸರ್ಕಾರಿ ಕಛೇರಿಗಳಲ್ಲಿ ಬಡ್ತಿ ಪಡೆಯಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಎಷ್ಟು ದಿನಗಳಲ್ಲಿ ನೀಡಲಾಗುವುದು ?